ಇ) ಆಯವ್ಯಯ ಅವಕಾಶವನ್ನು ಪರಿಶೀಲಿಸಿ ಕಾರ್ಯಕ್ರಮ ನೀಡಲಾಗುತ್ತದೆ.

ಈ) ಹೌದು

ಉ) ನಾಟಕ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಿಕೊಡಲು ಸಂಬಂಧಪಟ್ಟವರಿಗೆ ಸೂಚಿಸಲಾಗಿದೆ.

ರಾಷ್ಟ್ರೀಯ ಹೆದ್ದಾರಿಗಳ ಬಗ್ಗೆ

2011-ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು-ಬೆಳಗಾಂ ರಸ್ತೆ (ಎನ್.ಹೆಚ್-4)ಹೆದ್ದಾರಿಯಲ್ಲಿ ವಾಹನ ಸಂಚಾರ ಅಧಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಮೇಲ್ಕಂಡ ಹೆದ್ದಾರಿಯನ್ನು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳೇನು? ಹಾಗೂ ಇದಕ್ಕಾಗಿ ಮೀಸಲಾಗಿಟ್ಟ ಹಣವೆಷ್ಟು ಹಾಗೂ ಖರ್ಚಾದ ಹಣವೆಷ್ಟು?

ಇ) ಮೇಲ್ಕಂಡ ಹೆದ್ದಾರಿಯ ಡಾಂಬರೀಕರಣವು ಕಳಪೆ ಸಾಮಾಗ್ರಿಗಳಿಂದ ನಡೆಯುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೆ? ಹಾಗೂ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಜಿ.ಹೆಚ್. ಅಶ್ವತ್ಥರೆಡ್ಡಿ (ಲೋಕೋಪಯೋಗಿ ಸಚಿವರು)

ಅ) ಬಂದಿದೆ

ಆ) ರಾಷ್ಟ್ರೀಯ ಹೆದ್ದಾರಿಗಳು ಕೇಂದ್ರ ಸರ್ಕಾರದ ವ್ಯಾಪ್ತಿಯಲ್ಲಿ ಬರುತ್ತವೆ. ಬೆಂಗಳೂರು-ಬೆಳಗಾಂ ರಸ್ತೆಯು ಹಂತ ಹಂತವಾಗಿ 4 ಪಥದ ರಸ್ತೆಯನ್ನಾಗಿ ವಿಸ್ತರಿಸಲಾಗುತ್ತಿದೆ. ಕೇಂದ್ರ ಸರ್ಕಾರ ವಾರ್ಷಿಕ ಯೋಜನೆಗಳನ್ನು ಮಂಜೂರು ಮಾಡುತ್ತಾರೆ. ಪ್ರಸಕ್ತ ವಾರ್ಷಿಕ ಯೋಜನೆಯಲ್ಲಿ (1991-92) ಈ ವಿಸ್ತರಣಾ ಕಾರ್ಯ ಸೇರಿರುವುದಿಲ್ಲ. ನೆಲಮಂಗಲದಿಂದ ತುಮಕೂರು ಅಂದರೆ ಕಿ.ಮೀ. 30ರಿಂದ 66 ರವರೆಗೆ ಈಗಿರುವ ದ್ವಿಪಥ ರಸ್ತೆಯು 4 ಪಥವನ್ನಾಗಿ ವಿಸ್ತರಿಸುವ ಬಗ್ಗೆ ಆನೇ ಪಂಚವಾರ್ಷಿಕ ಯೋಜನೆಯಲ್ಲಿ ಸೇರಿಸಲು ಶಿಫಾರಸ್ಸು ಮಾಡಲಾಗಿದೆ. ಇದಕ್ಕಾಗಿ ಯಾವ ಹಣವನ್ನು ಮೀಸಲಾಗಿಟ್ಟಿಲ್ಲ.

ಬೆಂಗಳೂರು-ಪೂನಾ ರಸ್ತೆಯು ಕಿ.ಮೀ. 10 ರಿಂದ 30 ರವರೆಗೆ 2 ಪಥಗಳ ರಸ್ತೆಯನ್ನು 4 ಪಥಗಳ ರಸ್ತೆಯನ್ನಾಗಿ ವಿಸ್ತರಿಸುವ ಕಾರ್ಯವನ್ನು ಸುಮಾರು 550.00 ಲಕ್ಷ ರೂ.ಗಳ ವೆಚ್ಚದಲ್ಲಿ ಮಾಡಿ ಮುಗಿಸಲಾಗಿದೆ.

ಇ) ಕೇಂದ್ರ ಸರ್ಕಾರದ ವಿಶಿಷ್ಟ ವಿವರಣೆಗಳಿಗೆ ಅನುಗುಣವಾಗಿ ಕೆಲಸ ಮಾಡಲಾಗುತ್ತದೆ. ಕಳಪೆ ಸಾಮಾಗ್ರಿಗಳನ್ನು ಉಪಯೋಗಿಸುತ್ತಿರುವುದಿಲ್ಲ.

ಕುಮುದ್ವತಿ ನದಿಗೆ ಅಡ್ಡಲಾಗಿ ಸೇತುವೆ ಕಟ್ಟುವ ಬಗ್ಗೆ

2078 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ನೆಲಮಂಗಲ ತಾಲ್ಲೂಕು ಕಸಬಾ ಹೋಬಳಿಗೆ ಸೇರಿದ ಅಗಲಕುಪ್ಪೆ ಮತ್ತು ಹೊಸಹಳ್ಳಿ ಗ್ರಾಮಗಳ ಮಧ್ಯೆ ಕುಮುದ್ವತಿ ನದಿ ಹಳ್ಳಕ್ಕೆ ಸೇತುವೆ ಇಲ್ಲದಿರುವುದರಿಂದ ಆ ಭಾಗದ ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಅ) ಅವಶ್ಯವಿರುವ ಮೇಲ್ಕಂಡ ಸೇತುವೆ ನಿರ್ಮಿಸಲು ಸರ್ಕಾರವು ಕೂಡಲೇ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಜಿ.ಹೆಚ್. ಅಶ್ವತ್ಥರೆಡ್ಡಿ (ಲೋಕೋಪಯೋಗಿ ಸಚಿವರು)

ಅ) ಹೌದು

ಆ) ಈ ಸೇತುವೆ ನಿರ್ಮಾಣಕ್ಕೆ 10 ಲಕ್ಷ ರೂ.ಗಳ ಅಂದಾಜು ಮೊತ್ತವನ್ನು 1991-92ನೇ ಕ್ರಿಯಾ ಯೋಜನೆಯಲ್ಲಿ ಸೇರಿಸಿ, ಜಿಲ್ಲಾ ಪರಿಷತ್ ಅನುಮೋದನೆ ಕೋರಿದ್ದು ಅನುಮತಿ ದೊರೆತ ಕೂಡಲೇ ಕ್ರಮ ತೆಗೆದುಕೊಳ್ಳಲಾಗುವುದು.

ಪ್ರವಾಸೋದ್ಯಮದ ಅಭಿವೃದ್ಧಿ ಕುರಿತು

2067 - ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ-

ಅ) ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಕೈಗೊಂಡಿರುವ ಕ್ರಮಗಳೇನು?

ಆ) ಪ್ರವಾಸೋದ್ಯಮ ಅಭಿವೃದ್ಧಿ ವಿಶ್ವ ಬ್ಯಾಂಕಿನ ನೆರವನ್ನು ಪಡೆಯಲಾಗಿರುವುದೇ?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು)

ಅ) ಕರ್ನಾಟಕದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ:

1) ಪ್ರವಾಸಿಗರಿಗೆ ವಸತಿ ಸೌಲಭ್ಯ
2) ರಸ್ತೆಬದಿ ಸೌಲಭ್ಯ
3) ಉಪಹಾರ ಮಂದಿರ ಮತ್ತು ಶೌಚಾಲಯಗಳ ಸೌಲಭ್ಯ
4) ವಿವಿಧ ಮಾಧ್ಯಮಗಳ ಮೂಲಕ ಪ್ರವಾಸೋದ್ಯಮ ಸಂಪತ್ತಿನ ಪ್ರಚಾರ
5) ದೋಣಿ ವಿಹಾರ ಸೌಲಭ್ಯ ಹಾಗೂ ಜಲಕ್ರೀಡೆ
6) ವ್ಯವಸ್ಥಿತ ಪ್ರವಾಸಗಳು
7) ವಿಮಾನ ನಿಲ್ದಾಣ ಅಭಿವೃದ್ಧಿ
8) ಕರ್ನಾಟಕದ ಪ್ರಮುಖ ಉತ್ಸವಗಳ ಆಚರಣೆ

ಆ) ಇಲ್ಲ.

ಕೊಳವೆ ಬಾವಿಗಳ ರಿಪೇರಿ ಕುರಿತು

2068-ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳವೆ ಬಾವಿ ರಿಪೇರಿ ಮತ್ತು ಹೆಚ್ಚಿನ ಆಳ ಕೊರೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಆ) ಮಂಡಲ ಪಂಚಾಯಿತಿಗಳಲ್ಲಿ ಹಣದ ಕೊರತೆ ಇರುವುದರಿಂದ ಕೊಳವೆ ಬಾವಿಗಳನ್ನು ರಿಪೇರಿ ಮಾಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕೆ.ಹೆಚ್. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

1) ಕೊಳವೆ ಬಾವಿ ರಿಪೇರಿಯನ್ನು ಮಂಡಲಪಂಚಾಯತ್ ಮತ್ತು ಜಿಲ್ಲಾ ಪರಿಷತ್‌ನವರು ನಿರ್ವಹಿಸುತ್ತಾರೆ.